## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಗುತ್ತಿಗೆ/ಹೊರಗುತ್ತಿಗೆ ಹಾಗೂ ಗೌರವಧನದ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ನೌಕರರ ಅವಲಂಬಿತರಿಗೆ 5 ಲಕ್ಷ ರೂ.ವರೆಗೆ ನಗದು ರಹಿತ ಆರೋಗ್ಯ ಯೋಜನೆ ಜಾರಿಗೊಳಿಸಿರುವಂತೆಯೇ ಅರ್ಹ ದಿನಗೂಲಿ ನೌಕರರಿಗೂ ಸಹ ಈ ಸೌಲಭ್ಯವನ್ನು ವಿಸ್ತರಿಸುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂಖ್ಯೆ:ಆಕುಕ 324 ಸಿಜಿಇ 2025, ದಿನಾಂಕ:24.06.2025.
2. ಕಾರ್ಯಾಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಸಂಘ (ರಿ) ಇವರ ದಿನಾಂಕ:24.09.2024.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1)ರ ಆದೇಶದಲ್ಲಿ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಗುತ್ತಿಗೆ/ಹೊರಗುತ್ತಿಗೆ ಹಾಗೂ ಗೌರವಧನದ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ 3ಲಕ್ಷ ಸಿಬ್ಬಂದಿಗಳು ಮತ್ತು ಅವರ ಅವಲಂಬಿತರಿಗೆ ನಗದು ರಹಿತ ಆರೋಗ್ಯ ಭರವಸೆ ಯೋಜನೆಯನ್ನು ಮಾರ್ಗಸೂಚಗಳೊಂದಿಗೆ ಅನುಷ್ಠಾನಗೊಳಿಸುವ ಸಂಬಂಧ ನೌಕರರಿಂದ ಮಾಸಿಕ ಕೊಡುಗೆ ಮತ್ತು ಬಾಕಿ ಉಳಿದ ಹಣವನ್ನು ರಾಜ್ಯ ಖಜಾನೆಯಿಂದ ಪಾವತಿಸಲು ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ(2)ರ ಮನವಿಯಲ್ಲಿ ಕಾರ್ಯಾಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ಸಂಘ (ರಿ) ಇವರು ಸರ್ಕಾರದ ಆದೇಶ ಸಂಖ್ಯೆ:ಆಕುಕ 324 ಸಿಜಿಇ 2025, ದಿನಾಂಕ:24.06.2025ರಲ್ಲಿ ಗುತ್ತಿಗೆ/ಹೊರಗುತ್ತಿಗೆ ಹಾಗೂ ಗೌರವಧನದ ಆಧಾರದ ಮೇಲೆ ಕೆಲಸ ನಿರ್ವಹಿಸುತ್ತಿರುವ ನೌಕರರ ಅವಲಂಬಿತರಿಗೆ 5 ಲಕ್ಷ ರೂ.ವರೆಗೆ ನಗದು ರಹಿತ ಆರೋಗ್ಯ ಯೋಜನೆ ಜಾರಿಗೊಳಿಸಿರುವ ಹಾಗೆಯೇ **ಅರ್ಹ ದಿನಗೂಲಿ ನೌಕರರಿಗೂ ಸಹ ಈ ಸೌಲಭ್ಯವನ್ನು ವಿಸ್ತರಿಸುವಂತೆ** ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿದ ಸರ್ಕಾರವು ದಿನಾಂಕ:24.06.2025ರ ಮೇಲ್ಕಂಡ ಸರ್ಕಾರಿ ಆದೇಶದ ಉದ್ದೇಶವು ಎಲ್ಲಾ ತಾತ್ಕಾಲಿಕ ಉದ್ಯೋಗಿಗಳಿಗೆ ವಾರ್ಷಿಕ ರೂ.5,00,000/-ಗಳವರೆಗೆ ಆರೋಗ್ಯ ವಿಮಾ ಸೌಲಭ್ಯವನ್ನು ವಿಸ್ತರಿಸುವುದಾಗಿರುದರಿಂದ, ಸದರಿ ದಿನಗೂಲು ನೌಕರರಿಗೂ ಸಹ ಆರೋಗ್ಯ ವಿಮಾ ಸೌಲಭ್ಯವನ್ನು ವಿಸ್ತರಿಸುವ ಸಂಬಂದ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಆಕುಕ 36 ಸಿಜಿಇ 2026**
**ಬೆಂಗಳೂರು, ದಿನಾಂಕ:31.03.2026**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ಆಕುಕ 324 ಸಿಜಿಇ 2025, ದಿನಾಂಕ: 24.06.2025ರನ್ವಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಗುತ್ತಿಗೆ, ಹೊರಗುತ್ತಿಗೆ ಹಾಗೂ ಗೌರವಧನದ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳು ಮತ್ತು ಅವರ ಅವಲಂಬಿತರಿಗೆ ನಗದು ರಹಿತ ಆರೋಗ್ಯ ಭರವಸೆ ಯೋಜನೆಯ ಸೌಲಭ್ಯಗಳನ್ನು ದಿನಗೂಲಿ ನೌಕರರು ಮತ್ತು ಅವರ ಅವಲಂಬಿತರಿಗೆ ಸಹ ವಿಸ್ತರಿಸಿ ಆದೇಶಿಸಲಾಗಿದೆ.

ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ: ಆಕುಕ 324 ಸಿಜಿಇ 2025, ದಿನಾಂಕ: 24.06.2025ರಲ್ಲಿನ ಆದೇಶದಂತೆ ಅನುಷ್ಠಾನಗೊಳಿಸುವ ಸಂಬಂದ ಎಲ್ಲಾ ಅಂಸಗಳು ಸಹ ಆದೇಶಕ್ಕೂ ಅನ್ವಯವಾಗುತ್ತವೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

**(ಪ್ರಭಾಕರ. ಟಿ)** 31/03
ಸರ್ಕಾರದ ಅಧೀನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
(ಆರೋಗ್ಯ-1 & 2)
31/03

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು (ಜಿ &ಎಸ್.ಎಸ್.ಎ), (ಇ & ಆರ್.ಎಸ್.ಎ), (ಎ & ಇ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560001.
2. ಮಾನ್ಯ ಮುಖ್ಯ ಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು ವಿಧಾನಸೌಧ, ಬೆಂಗಳೂರು.
5. ಎಲ್ಲಾ ಇಲಾಖೆಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
6. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಕುಷ್ಟರೋಗ ಆಸ್ಪತ್ರೆ ಆವರಣ, ಮಾಗಡಿ ರಸ್ತೆ, ಬೆಂಗಳೂರು.
7. ಆಯುಕ್ತರು, ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ, ಅರಮನೆ ರಸ್ತೆ, ಬೆಂಗಳೂರು.
8. ಆಯುಕ್ತರು, ಆಯುಷ್ ಇಲಾಖೆ, ಧನ್ವಂತರಿ ರಸ್ತೆ, ಬೆಂಗಳೂರು.
9. ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, ಆರೋಗ್ಯಸೌಧ, ಬೆಂಗಳೂರು
10. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಆರೋಗ್ಯಸೌಧ, ಬೆಂಗಳೂರು.
11. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ವೈದ್ಯಕೀಯ ಸರಬರಾಜು ನಿಗಮ ನಿಯಮಿತ (KSMSCL), ಬೆಂಗಳೂರು.
12. ಸರ್ಕಾರದ ಅಪರ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ, ವಿಧಾನಸೌಧ, ಬೆಂಗಳೂರು (ಸಚಿವ ಸಂಪುಟ ನಿರ್ಣಯ ಸಂಖ್ಯೆ: 466/2025)
13. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯ ಸೌಧ, ಕುಷ್ಟರೋಗ ಆಸ್ಪತ್ರೆ ಆವರಣ, ಮಾಗಡಿ ರಸ್ತೆ, ಬೆಂಗಳೂರು.
14. ಹಿರಿಯ ನಿರ್ದೇಶಕರು ಹಾಗೂ ಪದ ನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ, ಮಾನವ ಅಭಿವೃದ್ಧಿ ವಿಭಾಗ, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
15. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4&5), ವಿಧಾನಸೌಧ, ಬೆಂಗಳೂರು.
16. ಶಾಖಾ ರಕ್ಷಾ ಕಡತ

**ಪ್ರತಿ ಮಾಹಿತಿಗಾಗಿ:**

1. ಸನ್ಮಾನ್ಯ ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿ, ಆರೋಗ್ಯ & ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
4. ಸರ್ಕಾರದ ಅಪರ ಕಾರ್ಯದರ್ಶಿರವರ ಆಪ್ತ ಸಹಾಯಕರು, ಆರೋಗ್ಯ & ಕುಟುಂಬ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.